ಕರ್ನಾಟಕ ವಿಧಾನ ಸಭೆ

ಸೋಮವಾರ ೧೭ನೇ ಡಿಸೆಂಬರ್ ೧೯೯೦

ಸದನವು ವಿಧಾನಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೧-೦೫ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ಎಸ್. ಎಂ. ಕೃಷ್ಣ) ಅವರು ಪೀಠವನ್ನು ಅಲಂಕರಿಸಿದರು.

ಸಂತಾಪ ಸೂಚನೆ

ಅಧ್ಯಕ್ಷರು : ಹಿರಿಯ ಸ್ವಾತಂತ್ರ್ಯ ಹೋರಾಟಗಾರ್ತಿ, ಪಂಡಿತ ಜವಾಹರಲಾಲ ನೆಹರೂ ಅವರ ಸಹೋದರಿ, ಜನನಾಯಕಿ, ಮಹಾಮುತ್ಸದ್ದಿ ಶ್ರೀಮತಿ ವಿಜಯಲಕ್ಷ್ಮಿ ಪಂಡಿತರು ಡಿಸೆಂಬರ ೧, ೧೯೯೦ ರಂದು ನಿಧನ ಹೊಂದಿದರೆಂದು ಈ ಸದನಕ್ಕೆ ತಿಳಿಸಲು ವಿಷಾದಿಸುತ್ತೇನೆ.

ಆಗಸ್ಟ್ ೧೮, ೧೯೦೦ ರಂದು ಜನ್ಮ ತಾಳಿದ ಶ್ರೀಮತಿ ವಿಜಯಲಕ್ಷ್ಮಿ ಪಂಡಿತ ಅವರು ತಮ್ಮ ಸಾರ್ವಜನಿಕ ಜೀವನಾರಂಭದಲ್ಲಿ ಅಲಹಾಬಾದ ಮುನಿಸಿಪಲ್ ಬೋರ್ಡಿನ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ೧೯೩೬ ರಿಂದ ೧೯೪೨ ರವರೆಗೆ ಉತ್ತರ ಪ್ರದೇಶದ ವಿಧಾನಸಭೆಯ ಸದಸ್ಯರಾಗಿದ್ದ ಶ್ರೀಮತಿಯವರು ಉತ್ತರ ಪ್ರದೇಶ ಸರ್ಕಾರದ ಸ್ಥಳೀಯ ಸ್ವಾಯತ್ತ ಸಂಸ್ಥೆಗಳ ಹಾಗೂ ಜನಾರೋಗ್ಯ ಸಚಿವರಾಗಿದ್ದರು. ೧೯೪೦ ರಿಂದ ೧೯೪೯ ರವರೆಗೆ ಅಖಿಲ ಭಾರತ ಮಹಿಳಾ ಸಮ್ಮೇಳನದ ಅಧ್ಯಕ್ಷರಾಗಿದ್ದರು. ೧೯೪೬ ರಿಂದ ೧೯೪೯ ರವರೆಗೆ ಆನಂತರ ಮತ್ತೆ ೧೯೬೨ರಲ್ಲಿ ವಿಶ್ವಸಂಸ್ಥೆಗೆ ಭಾರತೀಯ ನಿಯೋಗದ ನಾಯಕತ್ವ ವಹಿಸಿದ್ದರು. ೧೯೪೯ ರಿಂದ ೧೯೫೧ ರವರೆಗೆ ಸೋವಿಯತ್ ರಷ್ಯಾಕ್ಕೂ ೧೯೪೯ ರಿಂದ ೧೯೫೨ ರವರೆಗೆ ಅಮೇರಿಕ ಸಂಯುಕ್ತ ಸಂಸ್ಥಾನಗಳಿಗೂ ಭಾರತದ ರಾಯಭಾರಿಯಾಗಿದ್ದು, ೧೯೫೩ರಲ್ಲಿ ವಿಶ್ವ ಸಂಸ್ಥೆಯ ಜನರಲ್ ಅಸೆಂಬ್ಲಿಯ ಪ್ರಪ್ರಥಮ ಮಹಿಳಾ ಅಧ್ಯಕ್ಷೆಯಾಗಿ ಅತ್ಯಂತ ಸಮರ್ಥವಾಗಿ ಸೇವೆ ಸಲ್ಲಿಸಿದ್ದರು. ೧೯೫೫ ರಿಂದ ೧೯೬೧ ರವರೆಗೆ ಗ್ರೇಟ್ ಬ್ರಿಟನ್‌ಗೆ ಹೈಕಮೀಷನರ ಆಗಿದ್ದುದಲ್ಲದೆ, ಸ್ಪೇನ್ ಮತ್ತು ಜ್ಯೂರಿ ರಾಷ್ಟ್ರಗಳಿಗೆ ರಾಯಭಾರಿಯಾಗಿಯೂ ಕಾರ್ಯ ನಿರ್ವಹಿಸಿದ್ದರು. ೧೯೬೨ ರಿಂದ ೧೯೬೪ ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿಯೂ, ೧೯೬೪ ರಿಂದ ೧೯೬೬ ಹಾಗೂ ೧೯೭೭ ರಿಂದ ೧೯೭೯ ರವರೆಗೆ ಎರಡು ಭಾರಿ ಲೋಕಸಭೆಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಶ್ರೀಮತಿಯವರು ೧೯೪೫ ರಲ್ಲಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಆಯೋಗಕ್ಕೆ ಭಾರತದ ಪ್ರತಿನಿಧಿಯಾಗಿ ಪ್ರಶಂಸನೀಯ ಸೇವೆ ಸಲ್ಲಿಸಿದ್ದರು. ದೇಶ ವಿದೇಶಗಳ ವಿಶ್ವವಿದ್ಯಾನಿಲಯಗಳಿಂದ

ಎರಡು ಗೌರವ ಡಾಕ್ಟರೇಟ್ ಪದವಿಗಳನ್ನು ಪಡೆದಿದ್ದ ವಿಜಯಲಕ್ಷ್ಮಿ ಪಂಡಿತ ಅವರು ಭಾರತದ ಪ್ರಥಮ ಮಹಿಳಾ ಮಂತ್ರಿಗಳು, ಪ್ರಥಮ ಮಹಿಳಾ ರಾಯಭಾರಿಗಳು, ವಿಶ್ವಸಂಸ್ಥೆಗೆ ಸ್ವತಂತ್ರ ಭಾರತದ ಮೊಟ್ಟಮೊದಲ ನಿಯೋಗಕ್ಕೆ ನಾಯಕಿಯಾಗಿಯೂ ಅವಿಶ್ರಾಂತಿವಾಗಿ ದುಡಿದಿದ್ದ ಧೀಮಂತ ಮಹಿಳೆ ಎಂಬ ಕೀರ್ತಿ ಇವರದಾಗಿರುತ್ತದೆ. ಇವರ ನಿಧನದಿಂದ ಭಾರತದ ರಾಜಕೀಯ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕ್ಷೇತ್ರಗಳು ಬಡವಾಗಿವೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನ ಆಚರಿಸಿದರು)

ದಿವಂಗತ ಕುಟುಂಬ ವರ್ಗದವರಿಗೆ ಈ ಸಭೆ ಅಂಗೀಕರಿಸಿದ ಸಂತಾಪ ಸೂಚನೆ ನಿರ್ಣಯವನ್ನು ತಿಳುಹಿಸಿಕೊಡಲಾಗುವುದು.

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿಮಾತಿನ ಮೂಲಕ ನೀಡಲಾದ ಉತ್ತರಗಳು

ವಿಷಯ : ಮುಂಬಡ್ತಿಯಲ್ಲಿ ಮೀಸಲಾತಿಯನ್ನು ಅನುಷ್ಠಾನಗೊಳಿಸುವುದು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ ೧೯೦(ಲಖಳ)

ಶ್ರೀ ಜಿ. ಎಂ. ಕಾನಡೆ (ಸಿಸಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

೧) ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನೌಕರರಿಗೆ ಆಗುತ್ತಿರುವ ಅನ್ಯಾಯ ಸರ್ಕಾರದ ಗಮನಕ್ಕೆ ಬಂದಿದೆಯೇ ? ಮುಂಬಡ್ತಿ ವಿಷಯದಲ್ಲಿ ಅನುಷ್ಠಾನ ಮಾಡದಿರಲು ಕಾರಣವೇನು ?

ಶ್ರೀ ಕೆ. ಎಚ್. ಪಾಟೀಲ್ (ಸಹಕಾರ ಸಚಿವರು) : ೧) ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನೌಕರರಿಗೆ ಬಡ್ತಿ ಮೀಸಲಾತಿ ಸೌಲಭ್ಯ ಸಿಗದೆ ಆಗುತ್ತಿರುವ ಅನ್ಯಾಯ ಸರ್ಕಾರದ ಗಮನಕ್ಕೆ ಬಂದಿದೆ. ಸರ್ಕಾರದಿಂದ ನಿರ್ದೇಶನ ಬಾರದ ಕಾರಣ ಬಡ್ತಿಯಲ್ಲಿ ಮೀಸಲಾತಿ ಕೊಡಲು ಸಾಧ್ಯವಿಲ್ಲ ಎನ್ನುವ ಕಾರಣವನ್ನು ಬ್ಯಾಂಕು ನೀಡಿದ್ದು ಈ ಬಗ್ಗೆ ಅಗತ್ಯ ನಿರ್ದೇಶನವನ್ನು ಸಹಕಾರ ಸಂಘಗಳ ನಿಬಂಧಕರು ದಿನಾಂಕ ೧೩-೯-೯೦ ರಂದು ಸಹಕಾರ ಸಂಘಗಳ ಕಾಯಿದೆ ೧೯೫೯ ರ ಕಲಂ ೬೦-ಬಿ ರೀತಿ ನೀಡಿರುತ್ತಾರೆ.

ಶ್ರೀ ಗೋಪಾಲ ಮುಕುಂದ ಕಾನಡೆ : ಮಾನ್ಯ ಅಧ್ಯಕ್ಷರೇ, ಉತ್ತರವನ್ನೇನೋ ಕೊಟ್ಟಿದ್ದಾರೆ. ಆದರೆ ಇದು ಸರಿಯಾದ ಉತ್ತರವಲ್ಲ. ಏಕೆಂದರೆ ಪ್ರತಿ ಸಲ ಕೇಳಿ